ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಸಂಖ್ಯೆ:ಕಾಶಿಇ:ಆಶಾ:01:2016-17

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:14.11.2016.

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳ ಮಾಹಿತಿ ಪಡೆಯುವ ಬಗ್ಗೆ.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳು 2016-17ನೇ ಸಾಲಿನ ಕಾರ್ಯಭಾರವನ್ನು ಪರಿಗಣಿಸಿ ಕಾಲೇಜಿನಲ್ಲಿ ಖಾಲಿಯಿರುವ ಹುದ್ದೆಗಳ ದೃಢೀಕೃತ ಮಾಹಿತಿಯನ್ನು ಈ ಸುತ್ತೋಲೆಯಲ್ಲಿ ಲಗತ್ತಿಸಿರುವ ನಮೂನೆಗಳಲ್ಲಿ (ಅನುಬಂಧ-1 ಮತ್ತು 2) ದಿನಾಂಕ:16-11-2016ರ ಒಳಗಾಗಿ ಸಂಬಂಧಪಟ್ಟ ಪ್ರಾದೇಶಿಕ ಕಛೇರಿಗೆ ಕಳುಹಿಸಲು ಸೂಚಿಸುತ್ತಾ, ಪ್ರಾದೇಶಿಕ ಜಂಟಿ ನಿರ್ದೇಶಕರು ತಮ್ಮ ಕಛೇರಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಮಾಹಿತಿಯನ್ನು ಕ್ರೋಢೀಕರಿಸಿ, ಧೃಢೀಕರಿಸಿ, ಕಾಲೇಜುಗಳಿಂದ ಸಲ್ಲಿಸಿರುವ ಮಾಹಿತಿಗಳ ಮೂಲ ಪ್ರತಿಗಳೊಂದಿಗೆ ಈ ಕಛೇರಿಗೆ ದಿನಾಂಕ:22-11-2016ರ ಒಳಗಾಗಿ ಸಲ್ಲಿಸಲು ಸೂಚಿಸಲಾಗಿದೆ. ಸದರಿ ದೃಢೀಕೃತ ಮಾಹಿತಿ ಮತ್ತು Excel ಸಾಫ್ಟ್ ಕಾಪಿಯನ್ನು ಇಮೇಲ್ ವಿಳಾಸ: transfer.cce@gmail.com ಗೆ ಸಲ್ಲಿಸಲು ಪ್ರಾಂಶುಪಾಲರುಗಳಿಗೆ ಸೂಚನೆ ನೀಡಲಾಗಿದೆ.

***ವಿಶೇಷ ಸೂಚನೆ:-*** ಲಗತ್ತಿಸಿರುವ ಅನುಬಂಧ-1ರಲ್ಲಿ ಕಲಂ5 ಹಾಗೂ ಅನುಬಂಧ-2ರಲ್ಲಿ ಕಲಂ6ರಲ್ಲಿ ಖಾಲಿಯಿರುವ ಹುದ್ದೆಗಳ ಮಾಹಿತಿಯನ್ನು ನೀಡುವಾಗ ಪ್ರಾಂಶುಪಾಲರುಗಳು ಈ ಕೆಳಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು.

1. ಮಂಜೂರಾದ ಹುದ್ದೆ ಖಾಲಿಯಿರತಕ್ಕದ್ದು.
2. ಸದರಿ ಖಾಲಿ ಹುದ್ದೆಗಳಿಗೆ ಅಗತ್ಯ ಕಾರ್ಯಭಾರ ಅಂದರೆ ಕಲಾ/ವಾಣಿಜ್ಯ/ಭಾಷಾ ವಿಷಯಗಳಲ್ಲಿ ಕನಿಷ್ಟ 12 ಗಂಟೆಗಳು ಹಾಗೂ ವಿಜ್ಞಾನ ವಿಷಯದಲ್ಲಿ ಕನಿಷ್ಟ 16 ಗಂಟೆಗಳ ಕಾರ್ಯ ಭಾರವಿರತಕ್ಕದ್ದು.
3. ಪ್ರಾಂಶುಪಾಲರು ನೀಡಿರುವ ಮಾಹಿತಿಯ ಆಧಾರದ ಮೇಲೆ ಖಾಲಿಯಿರುವ ಹುದ್ದೆಗಳಿಗೆ ಎದುರಾಗಿ ಸಿಬ್ಬಂದಿಗಳನ್ನು ವರ್ಗಾಯಿಸಿದಲ್ಲಿ ಅವರುಗಳ ವೇತನಕ್ಕೆ ಯಾವುದೇ ರೀತಿಯಲ್ಲಿ ತೊಂದರೆ ಉಂಟಾದಲ್ಲಿ ಅದಕ್ಕೆ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ.
4. ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಸೂಕ್ತ ಶಿಸ್ತು ಕ್ರಮಕೈಗೊಳ್ಳಲಾಗುವುದು.

(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

Suilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ:

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಅಗತ್ಯ ಕ್ರಮಕ್ಕಾಗಿ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

ಸಂಖ್ಯೆ:ಕಾಶಿಇ:ಆಶಾ:01:2016-17

**ಅನುಬಂಧ-1**

**ಬೋಧಕರ (ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು, ದೈ.ಶಿ.ಬೋ) ವೃಂದಕ್ಕೆ ಸಂಬಂಧಿಸಿದಂತೆ ಮಾಹಿತಿ**

ಕಾಲೇಜಿನ ಹೆಸರು: ಕಾಲೇಜಿನ ದೂರವಾಣಿ:

ವಿಳಾಸ: ಇಮೇಲ್ ವಿಳಾಸ:

ಪ್ರಾಂಶುಪಾಲರ ಹೆಸರು: ಪ್ರಾಂಶುಪಾಲರ ದೂರವಾಣಿ:

| ಕ್ರ. ಸಂ. | ವಿಷಯ ಪದನಾಮ | ಮಂಜೂರಾದ ಹುದ್ದೆಗಳು | ಕಾಲೇಜಿನಲ್ಲಿ ಲೀನ್ ಹೊಂದಿರುವ ಉಪನ್ಯಾಸಕರುಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳು | ಕಾಲೇಜಿನಲ್ಲಿ 2016-17 ನೇ ಸಾಲಿನಲ್ಲಿ ಕಾಲಂ5 ರಲ್ಲಿ ಖಾಲಿ ಇರುವ ಹುದ್ದೆಗಳಿಗೆ ಲಭ್ಯವಿರುವ ಕಾರ್ಯಭಾರ |
|---|---|---|---|---|---|
| 1 | 2 | 3 | 4 | 5 | 6 |
| | | | | | |

**ಅನುಬಂಧ-2**

**ಬೋಧಕೇತರ ವೃಂದಕ್ಕೆ ಸಂಬಂಧಿಸಿದಂತೆ ಮಾಹಿತಿ**

| ಕ್ರ. ಸಂ. | ಪದನಾಮ | 2016-17 ನೇ ಸಾಲಿನ ವಿದ್ಯಾರ್ಥಿ ಸಂಖ್ಯೆ | ಮಂಜೂರಾದ ಹುದ್ದೆಗಳು | ಕಾಲೇಜಿನಲ್ಲಿ ಲೀನ್ ಹೊಂದಿರುವ ಸಿಬ್ಬಂದಿಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳು |
|---|---|---|---|---|---|
| 1 | 2 | 3 | 4 | 5 | 6 |
| | | | | | |

**<u>ದೃಢೀಕರಣ</u>**

ಅನುಬಂಧ-1ರ ಕಲಂ 5 & ಅನುಬಂಧ-2ರ ಕಲಂ 6ರಲ್ಲಿ ಮಂಜೂರಾದ ಹುದ್ದೆಗೆ ಎದುರಾಗಿ ನೀಡಿರುವ ಖಾಲಿ ಹುದ್ದೆಗಳಿಗೆ ಅಗತ್ಯ ಕಾರ್ಯಭಾರವಿರುತ್ತದೆ ಎಂದು ದೃಢೀಕರಿಸಲಾಗಿದೆ.

ಪ್ರಾಂಶುಪಾಲರು

***ವಿಶೇಷ ಸೂಚನೆ:-*** **ಲಗತ್ತಿಸಿರುವ ಅನುಬಂಧ-1ರಲ್ಲಿ ಕಲಂ5 ಹಾಗೂ ಅನುಬಂಧ-2ರಲ್ಲಿ ಕಲಂ6ರಲ್ಲಿ ಖಾಲಿಯಿರುವ ಹುದ್ದೆಗಳ ಮಾಹಿತಿಯನ್ನು ನೀಡುವಾಗ ಪ್ರಾಂಶುಪಾಲರುಗಳು ಈ ಕೆಳಕಂಡ ಅಂಶಗಳನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು.**

1. ಮಂಜೂರಾದ ಹುದ್ದೆ ಖಾಲಿಯಿರತಕ್ಕದ್ದು.
2. ಸದರಿ ಖಾಲಿ ಹುದ್ದೆಗಳಿಗೆ ಅಗತ್ಯ ಕಾರ್ಯಭಾರ ಅಂದರೆ ಕಲಾ/ವಾಣಿಜ್ಯ/ಭಾಷಾ ವಿಷಯಗಳಲ್ಲಿ ಕನಿಷ್ಠ 12 ಗಂಟೆಗಳು ಹಾಗೂ ವಿಜ್ಞಾನ ವಿಷಯದಲ್ಲಿ 16 ಗಂಟೆಗಳ ಕಾರ್ಯಭಾರವಿರತಕ್ಕದ್ದು.
3. ಪ್ರಾಂಶುಪಾಲರು ನೀಡಿರುವ ಮಾಹಿತಿಯ ಆಧಾರದ ಮೇಲೆ ಖಾಲಿಯಿರುವ ಹುದ್ದೆಗಳಿಗೆ ಎದುರಾಗಿ ಸಿಬ್ಬಂದಿಗಳನ್ನು ವರ್ಗಾಯಿಸಿದಲ್ಲಿ ಅವರುಗಳ ವೇತನಕ್ಕೆ ಯಾವುದೇ ರೀತಿಯಲ್ಲಿ ತೊಂದರೆ ಉಂಟಾದಲ್ಲಿ ಅದಕ್ಕೆ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ.
4. ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಸೂಕ್ತ ಶಿಸ್ತು ಕ್ರಮಕೈಗೊಳ್ಳಲಾಗುವುದು.